(80)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಮೇಶ್‌ಬಾಬು ಇವರು ನಿಯಮ 72ರಡಿ ಮಂಡಿಸಿರುವ ಸೂಚನೆಗೆ ಸರ್ಕಾರದ ಉತ್ತರ:**

**ಸೂಚನೆ:**

ರಾಜ್ಯ ಕಂದಾಯ ಇಲಾಖೆಯ ವ್ಯಾಪ್ತಿಯಲ್ಲಿ ಲಕ್ಷಾಂತರ ರೈತರು ತಮ್ಮ ಜೀವನೋಪಾಯಕ್ಕೆ ಸರ್ಕಾರಿ ಜಮೀನಿನಲ್ಲಿ ಉಳುಮೆ ಮಾಡುತ್ತಿದ್ದು, ಬಗರ್‌ಹುಕುಂ ಸಾಗುವಳಿ ಅಡಿಯಲ್ಲಿ, ಅಕ್ರಮ ಸಕ್ರಮ ಯೋಜನೆಯ ಅಡಿಯಲ್ಲಿ ತಮ್ಮ ಉಳುಮೆಯನ್ನು ಖಾಯಂಗೊಳಿಸಿ ಸಾಗುವಳಿ ಚೀಟಿ ನೀಡುವಂತೆ ಮನವಿ ಸಲ್ಲಿಸಿರುತ್ತಾರೆ. ರೈತರ ಪರಿಸ್ಥಿತಿಯನ್ನು ತಮ್ಮ ಲಾಭಕ್ಕೆ ಬಳಸಿಕೊಂಡು ದಲ್ಲಾಳಿಗಳು ಮತ್ತು ಕೆಲವು ಕಂದಾಯ ಇಲಾಖೆಯ ಅಧಿಕಾರಿಗಳು ನಿಯಮಬಾಹಿರವಾಗಿ ಸಾಗುವಳಿ ಚೀಟಿ ವಿತರಣೆ ಮಾಡುತ್ತಿರುವ ಹಲವಾರು ಆರೋಪಗಳು ಕೇಳಿ ಬರುತ್ತಿವೆ. ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ತಹಶಿಲ್ದಾರ್ ಕಛೇರಿಯಲ್ಲಿ ಕೆಲವು ದಲ್ಲಾಳಿಗಳು ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳು ಹಣ ಪಡೆದು ಕಾನೂನುಬಾಹಿರವಾಗಿ ಸಾಗುವಳಿ ಚೀಟಿಗಳನ್ನು ಹಂಚಿಕೆ ಮಾಡಿರುತ್ತಾರೆ. ಇದು ಮಾಧ್ಯಮಗಳಲ್ಲಿ ಸುದ್ದಿಯಾಗುವುದರ ಜೊತೆಗೆ ಕೆಲವು ಸಂಘಟನೆಗಳು ದೂರುಗಳನ್ನು ದಾಖಲಿಸಿರುತ್ತಾರೆ. ಪೊಲೀಸ್ ಇಲಾಖೆಯಲ್ಲಿ ಕೆಲವು ಆರೋಪಿಗಳ ಮೇಲೆ ಎಫ್‌ಐಆರ್ ದಾಖಲಾಗಿರುತ್ತದೆ. ಪ್ರಮುಖವಾಗಿ ಚಿಕ್ಕನಾಯಕನಹಳ್ಳಿ ತಹಶೀಲ್ದಾರ್ ಮತ್ತು ಇತರೆ ಕಂದಾಯ ಅಧಿಕಾರಿಗಳ ಮೇಲೆ ಆರೋಪಗಳು ಬಂದಿರುತ್ತದೆ. ಮಾನ್ಯ ಕಂದಾಯ ಸಚಿವರು ಚಿಕ್ಕನಾಯಕನಹಳ್ಳಿ ಕಂದಾಯ ಕಛೇರಿಯಲ್ಲಿ ಕಾನೂನುಬಾಹಿರ ಸಾಗುವಳಿ ಚೀಟಿ ವಿತರಣೆ ಸಂಬಂಧ ಮತ್ತು ದಲ್ಲಾಳಿಗಳು, ಕಂದಾಯ ಅಧಿಕಾರಿಗಳು ಅಕ್ರಮ ಎಸಗಿರುವ ಸಂಬಂಧ ಕ್ರಮ ಕೈಗೊಂಡು ಮೂಲ ರೈತರಿಗೆ ನ್ಯಾಯ ಒದಗಿಸಿಕೊಡಲು, ಮಾನ್ಯ ಕಂದಾಯ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕು ಕಚೇರಿಯಲ್ಲಿ ಕಾನೂನುಬಾಹಿರವಾಗಿ ಸಾಗುವಳಿ ಚೀಟಿ ವಿತರಣೆ ಮಾಡಿರುವ ನಕಲಿ/ಅನಧಿಕೃತ/ ಅನುಮಾನಾಸ್ಪದ ಕಡತಗಳನ್ನು ಜಪ್ತಿ ಮಾಡಲಾಗಿರುತ್ತದೆ. ನಕಲಿ ಕಡತ ಪತ್ತೆಯಾದ ಸಮಯದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಎಲ್.ಎನ್.ಡಿ ಅಭಿಲೇಖಾಲಯ ಶಾಖೆಯ ವಿಷಯ ನಿರ್ವಾಹಕರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲಾಗಿರುತ್ತದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ಪೊಲೀಸ್ ಠಾಣೆಯಲ್ಲಿ ಕ್ರೈಂ ನಂ:0182/2025 ಎಫ್‌ಐಆರ್ ದಿನಾಂಕ:19.11.2025 ರಂತೆ ನಕಲಿ ಸಾಗುವಳಿ ಚೀಟಿಯಲ್ಲಿರುವ 28 ಜನರ ವಿರುದ್ಧ ಎಫ್‌ಐಆರ್ ದಾಖಲಾಗಿದ್ದು, ಪ್ರಕರಣವು ತನಿಖಾ ಹಂತದಲ್ಲಿರುತ್ತದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸದರಿ ಅವಧಿಯಲ್ಲಿ ಕರ್ತವ್ಯ ನಿರ್ವಹಿಸಿದ ತಹಶೀಲ್ದಾರ್ ಗ್ರೇಡ್-1, ತಹಶೀಲ್ದಾರ್ ಗ್ರೇಡ್-2, ಅಭಿಲೇಖಾಲಯ ಮೇಲ್ವಿಚಾರಕರು, ಎಲ್.ಎನ್.ಡಿ ಶಿರಸ್ತೇದಾರ್, ಸಂಬಂಧಪಟ್ಟ ಕಂದಾಯ ತನಿಖಾಧಿಕಾರಿಗಳು, ಗ್ರಾಮ ಆಡಳಿತ ಅಧಿಕಾರಿಗಳು, ಎಲ್.ಎನ್.ಡಿ.ಆರ್.ಯು.ಸಿ ಶಾಖೆಯ ವಿಷಯ ನಿರ್ವಾಹಕರು, ಹಿಂದೆ ಕರ್ತವ್ಯ ನಿರ್ವಹಿಸಿದ್ದ ಅಭಿಲೇಖಾಲಯದ ವಿಷಯ ನಿರ್ವಾಹಕರು ಹಾಗೂ ಗ್ರಾಮ ಸಹಾಯಕರ ವಿರುದ್ಧ ಯಾವುದೇ ಗುರುತರವಾದ ಆರೋಪ ಸಾಬೀತಾಗದೇ ಇರುವುದರಿಂದ ತನಿಖಾ ವರದಿ ಸ್ವೀಕೃತವಾದ ತಕ್ಷಣವೇ ತಪ್ಪೆಸಗಿರುವ ಕಂದಾಯ ಇಲಾಖೆಯ ಅಧಿಕಾರಿ / ನೌಕರರ ವಿರುದ್ಧ ನಿಯಮಾನುಸಾರ ಕಾನೂನು ರೀತ್ಯಾ ಶಿಸ್ತು ಕ್ರಮ ಜರುಗಿಸಲು ಕ್ರಮವಹಿಸಲಾಗುವುದು.

**ಇ-ಕಂಇ 277 ಎಎಸ್‌ಡಿ 2026**

(ಡಾ. ಜಿ.ಪರಮೇಶ್ವರ)
ಉಪ ಮುಖ್ಯಮಂತ್ರಿಗಳು
ಕಂದಾಯ ಇಲಾಖೆ